ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1400 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಜಿ.ಪಾಟೀಲ್ (ಸ್ಥಳಿಯ ಸಂಸ್ಥೆಗಳ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 21.03.2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಬೀದಿ ಬದಿ ವ್ಯಾಪಾರಿಗಳ ಹಿತರಕ್ಷಣೆಗಾಗಿ ಸರ್ಕಾರವು ಯಾವುದಾದರೂ ವಿಶೇಷ ಕಲ್ಯಾಣ ಯೋಜನೆಯನ್ನು ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ಆ ಯೋಜನೆಗಳು ಯಾವುವು; (ವಿವರಗಳನ್ನು ನೀಡುವುದು) | ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಡೇ-ಎನ್‌ಯುಎಲ್‌ಎಂ ಯೋಜನೆಯು 30.09.2024 ರವರೆಗೆ ಮಾತ್ರ ಮುಂದುವರೆಸಲಾಗಿರುತ್ತದೆ. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ ಭಾರತ ಸರ್ಕಾರ ರವರ ಪತ್ರ ಸಂಖ್ಯೆ: K-11013(8)/1/2021-UPA-I-UD-Part(1)/E-9126071 ದಿನಾಂಕ:04.12.2024 ರಲ್ಲಿ ಹೊಸ ಯೋಜನೆಯಾದ ದೀನ್ ದಯಾಳ್ ಜನ್ ಆಜೀವಿಕ (ಶಹರಿ) ಯೋಜನೆಯನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಅನುಮೋದನೆಯನ್ನು ನೀಡಿರುತ್ತದೆ. ಅದರಂತೆ ಕರಡು ಮಾರ್ಗಸೂಚಿಯು ಸ್ವೀಕೃತವಾಗಿರುತ್ತದೆ ಮತ್ತು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ ರವರ ಪತ್ರ ಸಂಖ್ಯೆ:K-12011/1/2024-NULM-MoHUA (E-9182196) ದಿನಾಂಕ:14.02.2025 ರಲ್ಲಿ ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ತಿಳಿಸಿರುತ್ತಾರೆ.<br><br>ಅದರಂತೆ ಬೀದಿ ಬದಿ ವ್ಯಾಪಾರಿಗಳ ಹಿತರಕ್ಷಣೆಗಾಗಿ ಈ ಕೆಳಕಂಡಂತೆ ಯೋಜನೆಗಳಿರುತ್ತವೆ.<br><br>• <u>ನಗರ ಬೀದಿ ಬದಿ ವ್ಯಾಪಾರಸ್ಥರಿಗೆ ಬೆಂಬಲ:</u><br>○ ನಗರದ ಬೀದಿ ಬದಿ ವ್ಯಾಪಾರಸ್ಥರನ್ನು ಸಮೀಕ್ಷೆಯ ಮೂಲಕ ಗುರುತಿಸುವಿಕೆ.<br>○ ಗುರುತಿನ ಚೀಟಿ ಮತ್ತು ಮಾರಾಟ ಪ್ರಮಾಣ ಪತ್ರ ವಿತರಣೆ.<br>○ ಮಾರುಕಟ್ಟೆಯ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಮತ್ತು ಪೂರೈಕೆ.<br>○ ಮಾರುಕಟ್ಟೆ ವಲಯಗಳ ಅಭಿವೃದ್ಧಿ ಪಡಿಸುವಿಕೆ.<br>○ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ, ಬೀದಿ ಬದಿ ವ್ಯಾಪಾರಿಗಳ ನಿಯಂತ್ರಣ ಮತ್ತು ಪರವಾನಗಿ) ಅಧಿನಿಯಮ 2014 ಅನ್ನು ಜಾರಿಗೊಳಿಸಲಾಗಿರುತ್ತದೆ.<br>○ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ, ಬೀದಿ ಬದಿ ವ್ಯಾಪಾರಿಗಳ ನಿಯಂತ್ರಣ ಮತ್ತು ಪರವಾನಗಿ) ನಿಯಮ 2019 ಅನ್ನು ಜಾರಿಗೊಳಿಸಲಾಗಿರುತ್ತದೆ.<br>○ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ, ಬೀದಿ ಬದಿ ವ್ಯಾಪಾರಿಗಳ ನಿಯಂತ್ರಣ ಮತ್ತು ಪರವಾನಗಿ) ಯೋಜನೆ 2020 ಅನ್ನು ಜಾರಿಗೊಳಿಸಲಾಗಿರುತ್ತದೆ. |

| | |
|---|---|
| | • **ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ ನಿಧಿ ಯೋಜನೆಯಡಿ (ಪಿಎಂ ಸ್ವ-ನಿಧಿ):**<br>○ ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ ನಿಧಿ ಯೋಜನೆಯಡಿ ನಗರದ ಬೀದಿ ಬದಿ ವ್ಯಾಪಾರಿಗಳಿಗೆ ರೂ.10000/-, ರೂ.20,000/- ಮತ್ತು ರೂ.50,000/- ಕ್ರಮವಾಗಿ ಮೂರು ಹಂತಗಳಲ್ಲಿ ಬ್ಯಾಂಕ್ ಮೂಲಕ ಶೇ. 7ರಷ್ಟು ಬಡ್ಡಿ ಸಹಾಯಧನದೊಂದಿಗೆ ಕಿರು ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಅಲ್ಲದೆ ಡಿಜಿಟಲ್ ವಹಿವಾಟಿಗೆ ಉತ್ತೇಜನವನ್ನು ನೀಡಲಾಗುತ್ತಿದೆ.<br><br>ಸದರಿ ಯೋಜನೆಯಡಿ ಸಾಲ ಸೌಲಭ್ಯವನ್ನು ಪಡೆದ ಫಲಾನುಭವಿಗಳು ಮತ್ತು ಅವರ ಕುಟುಂಬದ ಸದಸ್ಯರುಗಳಿಗೆ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯನ್ನು ಕೈಗೊಳ್ಳುವ ಮೂಲಕ 8 ಸಾಮಾಜಿಕ ಭದ್ರತಾ ಯೋಜನೆಗಳು ಈ ಕೆಳಗಿನಂತಿವೆ:<br>1) ಪ್ರಧಾನಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ.<br>2) ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ .<br>3) ಪ್ರಧಾನಮಂತ್ರಿ ಜನನಿ ಸುರಕ್ಷಾ ಯೋಜನೆ.<br>4) ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ.<br>5) ಪ್ರಧಾನಮಂತ್ರಿ ಶ್ರಮಯೋಗಿ ಮಂದನ್ ಯೋಜನೆ.<br>6) ಒಂದು ರಾಷ್ಟ್ರ, ಒಂದು ಪಡಿತರ ಚೀಟಿ ಯೋಜನೆ.<br>7) ಪ್ರಧಾನಮಂತ್ರಿ ಜನ್‌ಧನ್ ಯೋಜನೆ.<br>8) ಅಸಂಘಟಿತ ಕಾರ್ಮಿಕರ ಮಂಡಳಿ ಯೋಜನೆಯಡಿ ಗುರುತಿನ ಚೀಟಿ ವಿತರಣೆ ಇತ್ಯಾದಿ ಸೌಲಭ್ಯಗಳನ್ನು ನೀಡಲಾಗುತ್ತಿದೆ. |
| (ಆ) ಬೀದಿ ಬದಿ ವ್ಯಾಪಾರಸ್ಥರನ್ನು ಗುರುತಿಸಲು ಸರ್ಕಾರದ ವತಿಯಿಂದ ಸರ್ವೆ ಮಾಡಲಾಗಿದೆಯೇ; ಮಾಡಿದಲ್ಲಿ ಅನುಸರಿಸಿರುವ ಮಾನದಂಡಗಳೇನು; (ವಿವರ ನೀಡುವುದು) | ಬೀದಿ ಬದಿ ವ್ಯಾಪಾರಸ್ಥರನ್ನು ಗುರುತಿಸಲು ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.<br>○ ನಗರ ಸ್ಥಳೀಯ ಸಂಸ್ಥೆವಾರು ಸಮೀಕ್ಷೆಯನ್ನು ಕೈಗೊಳ್ಳುವುದು.<br>○ ಬೀದಿ ಬದಿ ವ್ಯಾಪಾರಸ್ಥರ ವ್ಯಾಪಾರ ಮಾಡುವ ಸ್ಥಳಗಳಿಗೆ ಖುದ್ದಾಗಿ ಭೇಟಿ ನೀಡಿ ಸಮೀಕ್ಷೆ ಮೂಲಕ ಗುರುತಿಸುವಿಕೆ.<br>○ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬೀದಿ ವ್ಯಾಪಾರಸ್ಥರು ನೇರವಾಗಿ ಬಂದು ನೋಂದಣಿ ಮಾಡಿಕೊಳ್ಳಲು ಅವಕಾಶ.<br>○ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕ್ಯಾಂಪೇನ್ ಆಯೋಜಿಸುವ ಮೂಲಕ ಬೀದಿ ಬದಿ ವ್ಯಾಪಾರಸ್ಥರನ್ನು ಗುರುತಿಸುವಿಕೆ.<br>○ ಪಟ್ಟಣ ಮಾರಾಟ ಸಮಿತಿ ಸದಸ್ಯರಗಳ ಮೂಲಕ ಗುರುತಿಸುವಿಕೆ. |
| (ಇ) ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ಜನ ಬೀದಿ ಬದಿ ವ್ಯಾಪಾರ ಮಾಡಿ ಜೀವನ ಸಾಗಿಸುತ್ತಿದ್ದಾರೆ? (ಇದರ ಬಗ್ಗೆ ಅಂಕಿ – ಅಂಶಗಳನ್ನು ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ 13230 ಮತ್ತು ಯಾದಗಿರಿ ಜಿಲ್ಲೆಯಲ್ಲಿ 5457 ಬೀದಿ ಬದಿ ವ್ಯಾಪಾರಸ್ಥರಿರುತ್ತಾರೆ. |

ಸಂಖ್ಯೆ: ಕೌಉಜೀಇ 15 ಕೌಗುಪ್ರ 2025

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.